**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ, ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ ಮತ್ತು ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಈ ಸಂಸ್ಥೆಗಳಿಗೆ ಅವಶ್ಯವಿರುವ ಸಿ.ಟಿ.ಸ್ಕ್ಯಾನ್ (whole body 16 slice spiral CT Scanner) ಉಪಕರಣಗಳನ್ನು ಖರೀದಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

---

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಆಕುಕ 206 ಎಂಎಸ್‌ಎಫ್ 2013, ದಿನಾಂಕ 25.10.2013.
2. ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಬೆಂಗಳೂರು ಇವರ ಪತ್ರ ಸಂಖ್ಯೆ:ಎಂಇ/ಟೆಂಡರ್/28/2013-14, ದಿನಾಂಕ 10.03.2014 ಹಾಗೂ 18.03.2014.

**ಪ್ರಸ್ತಾವನೆ:**

ಓದಲಾದ (1) ರ ಸರ್ಕಾರದ ಆದೇಶದಲ್ಲಿ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ, ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ ಮತ್ತು ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಈ ಸಂಸ್ಥೆಗಳಿಗೆ ಅವಶ್ಯವಿರುವ 03 ಸಿ.ಟಿ.ಸ್ಕ್ಯಾನ್ (whole body 16 slice spiral CT Scanner) ಉಪಕರಣಗಳನ್ನು ಒಟ್ಟು ರೂ.7.80 ಕೋಟಿಗಳ ಅಂದಾಜು ಮೊತ್ತದಲ್ಲಿ ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಈ ಉಪಕರಣಗಳ ಖರೀದಿಗಾಗಿ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದಿಂದ ಕೆ.ಟಿ.ಪಿ.ಪಿ. ಕಾಯ್ದೆ, 1999 ಮತ್ತು ನಿಯಮಗಳು 2000 ರನ್ವಯ ಕೇಂದ್ರೀಕೃತ ಟೆಂಡರ್ ಕರೆಯಲು ಅನುಮತಿ ನೀಡಿದೆ.

ಓದಲಾದ (2) ರ ಪತ್ರಗಳಲ್ಲಿ ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಬೆಂಗಳೂರು ಇವರು ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಬೀದರ್, ಹಾಸನ ಮತ್ತು ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಸ್ನಾತಕೋತ್ತರ ಕೋರ್ಸುಗಳನ್ನು ಪ್ರಾರಂಭಿಸಲು ಎಂ.ಸಿ.ಐ.ನಿಯಮಗಳನ್ವಯ ಸಿ.ಟಿ.ಸ್ಕ್ಯಾನ್ (whole body 16 slice spiral CT Scanner) ಉಪಕರಣಗಳನ್ನು ಹೊಂದುವುದು ಕಡ್ಡಾಯವಾಗಿದ್ದು, ಸದರಿ ಸಿ.ಟಿ.ಸ್ಕ್ಯಾನ್ ಉಪಕರಣಗಳ ಖರೀದಿಗಾಗಿ ಸರ್ಕಾರದ ಅನುಮತಿಯೊಂದಿಗೆ ನಿಯಮಾನುಸಾರ ಕೇಂದ್ರೀಕೃತ ಅಲ್ಪಾವಧಿ ಟೆಂಡರ್ ಕರೆಯಲಾಗಿದೆಯೆಂದು ತಿಳಿಸಿರುತ್ತಾರೆ. ಸದರಿ ಟೆಂಡರ್‌ನಲ್ಲಿ ಪಾಲ್ಗೊಂಡ ಎಲ್1 ಟೆಂಡರ್‌ದಾರರಾದ M/s.Foress Healthcare LLP, Bangalore ಇವರು ಸದರಿ 03 ಸಿ.ಟಿ.ಸ್ಕ್ಯಾನ್ ಉಪಕರಣಗಳನ್ನು ರೂ.2,35,50,000/- ಗಳಂತೆ ಒಟ್ಟು ರೂ.7,06,50,000/- ಗಳ ಮೊತ್ತದಲ್ಲಿ ಸರಬರಾಜು ಮಾಡಲು ಒಪ್ಪಿದ್ದು, ಈ ಉಪಕರಣಗಳನ್ನು ವಿದೇಶದಿಂದ ಆಮದು ಮಾಡಿಕೊಳ್ಳಬೇಕಾಗಿರುವುದರಿಂದ ಮೂಲ ಸರಬರಾಜುದಾರರ ಹೆಸರಿನಲ್ಲಿ ಎಲ್.ಸಿ.ತೆರೆಯಬೇಕಾಗಿರುತ್ತದೆಂದು ತಿಳಿಸುತ್ತಾ, ಸದರಿ ಸಿ.ಟಿ.ಸ್ಕ್ಯಾನ್ ವಿದೇಶಿ ಉಪಕರಣಗಳ ಖರೀದಿಗಾಗಿ ಪ್ರತಿ ಉಪಕರಣಕ್ಕೆ ರೂ.2,35,50,000/- ಗಳಂತೆ (ತೆರಿಗೆ ಶೇ.5.5 ರಷ್ಟು ಸೇರಿ) ಒಟ್ಟು 03 ಸಿ.ಟಿ.ಸ್ಕ್ಯಾನ್ ಉಪಕರಣಗಳಿಗಾಗಿ ರೂ.7,06,50,000/- ಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಹಾಗೂ ಸದರಿ ಉಪಕರಣಗಳು ವಿದೇಶಿ ಉಪಕರಣಗಳಾಗಿರುವುದರಿಂದ ಈ ಮೊತ್ತವನ್ನು ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಎಲ್.ಸಿ. ತೆರೆಯುವ ಸಲುವಾಗಿ ಠೇವಣಿ ಇಡಲು ಅನುಮತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

22.4.14

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಪರಿಶೀಲಿಸಿದ ನಂತರ, ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಸ್ವಾಯತ್ತ ಸಂಸ್ಥೆಗಳಾದ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ, ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ ಮತ್ತು ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಈ ಸಂಸ್ಥೆಗಳಿಗೆ ಅವಶ್ಯವಿರುವ 03 ಸಿ.ಟಿ.ಸ್ಕ್ಯಾನ್ (whole body 16 slice spiral CT Scanner) ಉಪಕರಣಗಳ ಖರೀದಿಗಾಗಿ ಪ್ರತಿ ಉಪಕರಣಕ್ಕೆ ರೂ.2,35,50,000/- ಗಳಂತೆ ಒಟ್ಟು ರೂ.7,06,50,000/- ಗಳ ಅನುದಾನವನ್ನು ಬಿಡುಗಡೆ ಮಾಡಲು ಹಾಗೂ ಸದರಿ ಉಪಕರಣಗಳು ವಿದೇಶಿ ಉಪಕರಣಗಳಾಗಿರುವುದರಿಂದ ಈ ಮೊತ್ತವನ್ನು ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಎಲ್.ಸಿ. ತೆರೆಯುವ ಸಲುವಾಗಿ ಠೇವಣಿ ಇಡಲು ಅನುಮತಿ ನೀಡಲು ಸರ್ಕಾರವು ತೀರ್ಮಾನಿಸಿ ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 125 ಎಂಎಸ್ಎಫ್ 2014, ಬೆಂಗಳೂರು, ದಿನಾಂಕ 22.04.2014**

ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಸ್ವಾಯತ್ತ ಸಂಸ್ಥೆಗಳಾದ ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ, ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ ಮತ್ತು ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್ ಈ ಸಂಸ್ಥೆಗಳಿಗೆ ಅವಶ್ಯವಿರುವ 03 ಸಿ.ಟಿ.ಸ್ಕ್ಯಾನ್ (whole body 16 slice spiral CT Scanner) ಉಪಕರಣಗಳ ಖರೀದಿಗಾಗಿ ಪ್ರತಿ ಉಪಕರಣಕ್ಕೆ ರೂ.2,35,50,000/- ಗಳಂತೆ (ಎರಡು ಕೋಟಿ ಮೂವತ್ತೈದು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಒಟ್ಟು ರೂ.7,06,50,000/- ಗಳ (ಏಳು ಕೋಟಿ ಆರು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಅನುದಾನವನ್ನು ಬಿಡುಗಡೆ ಮಾಡಿದೆ ಹಾಗೂ ಸದರಿ ಉಪಕರಣಗಳು ವಿದೇಶಿ ಉಪಕರಣಗಳಾಗಿರುವುದರಿಂದ ಈ ಮೊತ್ತವನ್ನು ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಎಲ್.ಸಿ. ತೆರೆಯುವ ಸಲುವಾಗಿ ಠೇವಣಿ ಇಡಲು ವೈದ್ಯಕೀಯ ಶಿಕ್ಷಣ ನಿರ್ದೇಶಕರಿಗೆ ಅನುಮತಿ ನೀಡಲಾಗಿದೆ.

ಈ ವೆಚ್ಚವನ್ನು 2014-15 ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4210-03-105-1-02-386 ಯೋಜನೆ ಅಡಿ ಒದಗಿಸಲಾಗಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಉಪಕರಣಗಳ ಖರೀದಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು, 2000 ರ ಪ್ರಕಾರ ಮಾಡತಕ್ಕದ್ದು.

1958 ಕರ್ನಾಟಕ ಆರ್ಥಿಕ ಸಂಹಿತೆಯ 161ನೇ ಅನುಚ್ಛೇದದಡಿ ಯಾವ ಉದ್ದೇಶಕ್ಕಾಗಿ ಮೇಲ್ಕಂಡ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದು. ನಿಗದಿತ ನಮೂನೆಯಲ್ಲಿ ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಆಯಾ ಸಂಸ್ಥೆಗಳ ನಿರ್ದೇಶಕರು ವೈದ್ಯಕೀಯ ಶಿಕ್ಷಣ ನಿರ್ದೇಶಕರಿಂದ ಪಡೆದು ಸರ್ಕಾರಕ್ಕೆ ಮತ್ತು ಮಹಾಲೇಖಪಾಲರಿಗೆ ಸಲ್ಲಿಸತಕ್ಕದ್ದು. ಇದೂವರೆಗೆ ಬಿಡುಗಡೆ ಮಾಡಲಾದ ಅನುದಾನದ ಬಳಕೆ ಪ್ರಮಾಣ ಪತ್ರ ಮತ್ತು ಕಾಮಗಾರಿಯ ಪ್ರಗತಿಯ ವರದಿಯನ್ನು ಸಲ್ಲಿಸದೆ ಇದ್ದ ಪಕ್ಷದಲ್ಲಿ ಅನುದಾನದ ಭವಿಷ್ಯ ಬೇಡಿಕೆಯನ್ನು ಪರಿಗಣಿಸಲಾಗುವುದಿಲ್ಲ. ಸದರಿ ಸಂಹಿತೆಯ 342 (ii) (x) ನೇ ಅನುಚ್ಛೇದದಡಿ ಹೊಂದಾಣಿಕೆ (ರೀಕನ್ಸಿಲಿಯೇಷನ್) ಪ್ರಮಾಣ ಪತ್ರವನ್ನು ಮಹಾಲೇಖಪಾಲಕರ ಕಛೇರಿಯಿಂದ ಪಡೆದು ಮೂರು ತಿಂಗಳ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

22.4.14

ತತ್ಸಂಬಂಧಿತ ಅನುದಾನದ ಬಿಲ್ಲುಗಳಿಗೆ ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ಇವರು ಮೇಲು ರುಜು ಮಾಡಲು ಅಧಿಕೃತಗೊಳಿಸಲಾಗಿದೆ.

ಸಂಬಂಧಿಸಿದ ಸಂಸ್ಥೆಯ ನಿರ್ದೇಶಕರು ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಡ್ರಾ ಮಾಡುವ ಬಿಲ್ಲುಗಳಿಗೆ ಸಕ್ಷಮ ಪ್ರಾಧಿಕಾರದ ಮೇಲು ರುಜು ಪಡೆದು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ಇಲ್ಲಿ ಸಲ್ಲಿಸತಕ್ಕದ್ದು.

ಮೇಲ್ಕಂಡಂತೆ ಬಿಡುಗಡೆಗೊಳಿಸಲಾದ ಅನುದಾನವನ್ನು ವೈದ್ಯಕೀಯ ಶಿಕ್ಷಣ ನಿರ್ದೇಶಕರು ಸರಬರಾಜುದಾರರಿಗೆ ನೇರವಾಗಿ ಪಾವತಿಸುವ ಸಲುವಾಗಿ ಈ ಅನುದಾನವನ್ನು ಆಯಾ ಸಂಸ್ಥೆಗಳ ನಿರ್ದೇಶಕರು ಡ್ರಾ ಮಾಡಿಕೊಂಡು ವೈದ್ಯಕೀಯ ಶಿಕ್ಷಣ ನಿರ್ದೇಶಕರ ಖಾತೆಗೆ ವರ್ಗಾಯಿಸತಕ್ಕದ್ದು. ಈ ಅನುದಾನಕ್ಕೆ ಬಳಕೆ ಪ್ರಮಾಣ ಪತ್ರವನ್ನು ವೈದ್ಯಕೀಯ ಶಿಕ್ಷಣ ನಿರ್ದೇಶಕರು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಟಿಪ್ಪಣಿ ಸಂಖ್ಯೆ:ಆಕುಕ 714 ಆಂಆಸ 2014, ದಿನಾಂಕ 11.04.2014 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

..............................

ಬಿ.ಆರ್.ನಾಗಭೂಷಣ

(ಬಿ.ಆರ್.ನಾಗಭೂಷಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

22.4.14

**ಇವರಿಗೆ:**

1. ಮಹಾಲೇಖಪಾಲರು (ಲೆಕ್ಕಪತ್ರ) / (ಲೆಕ್ಕಪರಿಶೋಧನೆ 1 ಮತ್ತು 2), ಕರ್ನಾಟಕ, ಬೆಂಗಳೂರು-560001.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
3. ನಿರ್ದೇಶಕರು, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ-573201.
4. ನಿರ್ದೇಶಕರು, ಬೆಳಗಾಂ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾಂ-590001
5. ನಿರ್ದೇಶಕರು, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್-585401.
6. ನಿರ್ದೇಶಕರು, ಖಜಾನೆ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ- 4 ಮತ್ತು 5), ವಿಧಾನ ಸೌಧ, ಬೆಂಗಳೂರು.
10. ಖಜಾನಾ ಉಪ ನಿರ್ದೇಶಕರು, ಟಿ.ಎಸ್.ಎಂ.ಸಿ., ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
2. ಸರ್ಕಾರದ ಉಪ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.